# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ : ಎ8/ಎಸ್.ಎಸ್.ಎಲ್.ಸಿ/ಎಸ್.ಓ.ಪಿ/05/2021-22 ದಿನಾಂಕ:22-06-2021

**::: ಸುತ್ತೋಲೆ :::**

ವಿಷಯ:- ಕೋವಿಡ್-19ರ ಹಿನ್ನೆಲೆಯಲ್ಲಿ 2020-21ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಸಲು ಪ್ರಮಾಣಿತ ಕಾರ್ಯಾಚರಣಾ ವಿಧಾನ (ಎಸ್.ಓ.ಪಿ) (Standard Operating Procedure).

ಉಲ್ಲೇಖ:- 1. ದಿನಾಂಕ:11.06.2021ರಂದು ನಡೆದ Covid-19 Technical Advisory Committee (TAC), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ರವರ 110ನೇ ಸಭೆಯ ನಡಾವಳಿಯಂತೆ.

2. ಸರ್ಕಾರದ ಆದೇಶ ಸಂಖ್ಯೆ ಇಪಿ 110 ಎಸ್‌ಎಲ್‌ಬಿ 2021 ದಿನಾಂಕ:18.06.2021

*********

2020-21ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ದಿನಾಂಕ:21.06.2021 ರಿಂದ 05.07.2021ರವರೆಗೆ ನಡೆಸಲು ಉದ್ದೇಶಿಸಲಾಗಿತ್ತು, ಆದರೆ ಕೋವಿಡ್-19ರ 2ನೇ ಅಲೆಯು ವ್ಯಾಪಿಸಿರುವ ಕಾರಣ ಪರೀಕ್ಷೆಯನ್ನು ಮುಂದೂಡಲಾಗಿದ್ದು, ಸದರಿ ಪರೀಕ್ಷೆಯನ್ನು ಜುಲೈ ಮೂರನೇ ವಾರದಲ್ಲಿ ನಡೆಸಲು ಉದ್ದೇಶಿಸಲಾಗಿದೆ.

ಕಳೆದ ಸಾಲಿನಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಸುರಕ್ಷತಾ ದೃಷ್ಟಿಯಿಂದ ಮಂಡಳಿಯಿಂದ ಹೊರಡಿಸಲಾದ ಎಸ್.ಓ.ಪಿ ಯನ್ನು ಪಾಲಿಸಿ ಪರೀಕ್ಷೆಯನ್ನು ಯಶಸ್ವಿಗೊಳಿಸಲಾಗಿದೆ. ಅದೇ ರೀತಿ ಪ್ರಸ್ತುತ ಸಾಲಿನಲ್ಲಿ ಜುಲೈ ಮಾಹೆಯಲ್ಲಿ ನಡೆಯುವ ಪರೀಕ್ಷೆಗೆ ಈ ಕೆಳಕಂಡ ಎಸ್.ಓ.ಪಿ ಯನ್ನು ಹೊರಡಿಸಲಾಗಿರುತ್ತದೆ. ಸದರಿ ಎಸ್.ಓ.ಪಿ ಯಲ್ಲಿನ ಮಾರ್ಗಸೂಚಿಯನ್ನು ಇಲಾಖೆಯ ಎಲ್ಲಾ ಹಂತದ ಅಧಿಕಾರಿಗಳು, ಸಂಬಂಧಿಸಿದ ಇತರೆ ಇಲಾಖೆಯ ಅಧಿಕಾರಿಗಳು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಆದೇಶಿಸಿದೆ.

**I. ಪರೀಕ್ಷಾ ಕೇಂದ್ರ :**

1. ಪ್ರತಿ ಪರೀಕ್ಷಾ ಕೇಂದ್ರವನ್ನು (ಪರೀಕ್ಷಾಕೊಠಡಿ, ಶೌಚಾಲಯ ಇತ್ಯಾದಿ) ಪರೀಕ್ಷೆಯ ಮುನ್ನಾ ಮತ್ತು ಪರೀಕ್ಷೆಯಾದ ನಂತರ 1 % ಸೋಡಿಯಂ ಹೈಪೋಕ್ಲೋರೈಟ್ ಸೆಲ್ಯೂಷನ್ ಸೋಂಕು ನಿವಾರಕ ದ್ರಾವಣವನ್ನು ಸಂಬಂಧಪಟ್ಟ ನಗರ/ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಮೂಲಕ ಸಿಂಪಡಿಸಿ ಸ್ವಚ್ಛಗೊಳಿಸುವುದು.
2. ಪ್ರತಿ ಪರೀಕ್ಷೆಯ ಮುನ್ನಾ ಮತ್ತು ಪರೀಕ್ಷೆಯಾದ ನಂತರ ಪರೀಕ್ಷಾ ಕೇಂದ್ರದ ಎಲ್ಲಾ ಕೊಠಡಿಗಳು/ಪೀಠೋಪಕರಣಗಳನ್ನು ಮತ್ತು ಇನ್ನಿತರ ವಸ್ತುಗಳನ್ನು 2.5 % ಲೈಸೋಲ್ ಅಥವಾ ಹ್ಯಾಂಡ್ ಸ್ಯಾನಿಟೈಸರ್‌ನಿಂದ ಸ್ಯಾನಿಟೈಸ್ ಮಾಡುವುದು.
3. ಪ್ರತಿ ಪರೀಕ್ಷಾ ಕೇಂದ್ರದಲ್ಲೂ, ಪರೀಕ್ಷಾ ಕೇಂದ್ರದ ಒಳಗೆ ಪ್ರವೇಶಿಸುವ ಪ್ರದೇಶದಲ್ಲಿ ಹಾಗೂ ಪರೀಕ್ಷಾ ಕೊಠಡಿಗಳಲ್ಲಿ ಆರು ಅಡಿ ಅಥವಾ 2 ಮೀಟರ್ ದೈಹಿಕ ಅಂತರವನ್ನು ಕಾಯ್ದುಕೊಳ್ಳಲು ಸೂಕ್ತ ವ್ಯವಸ್ಥೆ ಕಲ್ಪಿಸುವುದು.

